ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

SCVT ವತಿಯಿಂದ ನಡೆಯುತ್ತಿರುವ ITI ಕಾಲೇಜುಗಳ ಫಲಿತಾಂಶ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ(ಪದವೀಧರರ ಕ್ಷೇತ್ರ) -

141 (255) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಎಸ್.ಸಿ.ವಿ.ಟಿ. (SCVT) ವತಿಯಿಂದ ನಡೆಯುತ್ತಿರುವ ಐ.ಟಿ.ಐ. ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಎಸ್.ಸಿ.ವಿ.ಟಿ. ವತಿಯಿಂದ ನಡೆಯುತ್ತಿರುವ ಐ.ಟಿ.ಐ. ಕಾಲೇಜುಗಳ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶವನ್ನು ಕಳೆದ 02 ವರ್ಷಗಳಿಂದ ಪ್ರಕಟಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಫಲಿತಾಂಶ ವಿಳಂಬವಾಗಲು ಕಾರಣಗಳೇನು; ಫಲಿತಾಂಶಗಳನ್ನು ಆದಷ್ಟು ಬೇಗನೆ ಪ್ರಕಟಿಸಲು ಯಾವ ಕ್ರಮ ಕೈಗೊಳ್ಳಲಾಗುವುದು;

(ಈ) ಫಲಿತಾಂಶ ವಿಳಂಬವಾಗಿರುವುದರಿಂದ ವಿದ್ಯಾರ್ಥಿಗಳ ಭವಿಷ್ಯಕ್ಕೆ ತೊಂದರೆಯಾಗಿರುವುದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?